## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಭಾರತ ಸಂವಿಧಾನದ ಪೀಠಿಕೆಯನ್ನು ರಾಜ್ಯದ ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಪ್ರಾರ್ಥನಾ ಸಮಯದಲ್ಲಿ ಓದುವ ಮತ್ತು ಪ್ರತಿಜ್ಞೆ ಮಾಡುವ ಮೂಲಕ ಪೀಠಿಕೆಯ ತತ್ವಗಳನ್ನು ಅಳವಡಿಸಿಕೊಳ್ಳುವುದು ಹಾಗೂ ರಾಜ್ಯದ ವ್ಯಾಪ್ತಿಯಲ್ಲಿರುವ ಎಲ್ಲಾ ಸಾರ್ವಜನಿಕ ಕಛೇರಿಗಳು, ಪ್ರಮುಖ ಸ್ಥಳಗಳಲ್ಲಿ, ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ಸಂವಿಧಾನ ಪೀಠಿಕೆಯನ್ನು ಪ್ರದರ್ಶಿಸುವ ಬಗ್ಗೆ.

**ಓದಲಾಗಿದೆ:** ದಿನಾಂಕ:15-06-2023 ರಂದು ಜರುಗಿದ ಸಚಿವ ಸಂಪುಟದ ಸಭೆಯ ತೀರ್ಮಾನ (ಸಂಖ್ಯೆ:ಸಿ.329/2023).

*****

**ಪ್ರಸ್ತಾವನೆ:-**

1. ಭಾರತ ಸಂವಿಧಾನವನ್ನು ದಿನಾಂಕ:26ನೇ ನವೆಂಬರ್ 1949 ರಂದು ನಮಗೆ ನಾವೇ ಅಂಗೀಕರಿಸಿ ಅರ್ಪಿಸಿಕೊಂಡಿದ್ದು, ಸಂವಿಧಾನದ ಪೀಠಿಕೆಯು ಸಂವಿಧಾನದ ಸಾರಾಂಶವಾಗಿದೆ ಮತ್ತು ಇದರಲ್ಲಿ ರಾಜ್ಯ ಸರ್ಕಾರ ಮತ್ತು ನಾಗರಿಕರಿಗೆ ಮಾರ್ಗದರ್ಶನ ನೀಡುವ ತತ್ವಗಳನ್ನು ಅಳವಡಿಸಿಕೊಳ್ಳಲಾಗಿದೆ.

2. ಪೀಠಿಕೆಯಲ್ಲಿ ನಮೂದಿಸಲಾದ ತತ್ವಗಳನ್ನು ಎಲ್ಲಾ ನಾಗರಿಕರಲ್ಲಿ ಅಳವಡಿಸಿಕೊಂಡು ಅಂತರ್ಗತಗೊಳಿಸಿದಾಗ ಮಾತ್ರ ಸಂವಿಧಾನದ ಉದ್ದೇಶಗಳನ್ನು ಸಾಧಿಸಲು ಸಾಧ್ಯವಾಗುತ್ತದೆ.

3. ಪೀಠಿಕೆಯಲ್ಲಿ ನಮೂದಿಸಲಾದ ಮೊದಲ ತತ್ವವು ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು ಒದಗಿಸುವುದು ಎಂದು ಇರುತ್ತದೆ. ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು ಮತ್ತು ಇತರ ದುರ್ಬಲ ವರ್ಗಗಳ ಕಲ್ಯಾಣದ ಜವಾಬ್ದಾರಿಯನ್ನು ಹೊಂದಿರುತ್ತದೆ. ಪ್ರತಿಯೊಬ್ಬರಿಗೂ ಸಾಮಾಜಿಕ ಮತ್ತು ಆರ್ಥಿಕ ನ್ಯಾಯವನ್ನು ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದು ಸಮಾಜ ಕಲ್ಯಾಣ ಇಲಾಖೆಯ ಪ್ರಮುಖ ಕಾರ್ಯವಾಗಿರುತ್ತದೆ.

4. ಈ ನಿಟ್ಟಿನಲ್ಲಿ, ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ಧರಾಮಯ್ಯ ಮತ್ತು ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಇವರು ಸಂವಿಧಾನಿಕ ಪೀಠಿಕೆಯಲ್ಲಿನ ತತ್ವಗಳನ್ನು ಸರ್ಕಾರಿ ನೌಕರರು, ನಾಗರಿಕರು ಹಾಗೂ



File No. ED/191/VVD/2025-ED SO GEN2-EDUCATION HIGHER SEC (Computer No. 1847633)

ವಿಶೇಷವಾಗಿ ವಿದ್ಯಾರ್ಥಿಗಳಲ್ಲಿ ಪರಿಣಾಮಕಾರಿಯಾಗಿ ಹೆಚ್ಚಾಗಿ ಪ್ರಚುರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿರುತ್ತಾರೆ.

5. ಸಮಾಜ ಕಲ್ಯಾಣ ಇಲಾಖೆಯು ಸಲ್ಲಿಸಿರುವ ಪ್ರಸ್ತಾವನೆಗೆ ದಿನಾಂಕ:15-06-2023 ರಂದು ಜರುಗಿದ ಸಚಿವ ಸಂಪುಟದ ಸಭೆಯಲ್ಲಿ ಅನುಮೋದನೆ ನೀಡಿ, ಅದರಂತೆ ಅನುಷ್ಠಾನಗೊಳಿಸುವ ಬಗ್ಗೆ ಈ ಕೆಳಕಂಡಂತೆ ನಿರ್ದೇಶನಗಳನ್ನು ನೀಡಿರುತ್ತದೆ.

    1. ರಾಜ್ಯದ ವಿಧಾನಸಭೆ ಮತ್ತು ವಿಧಾನ ಪರಿಷತ್ತುಗಳ ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಭಾರತದ ಸಂವಿಧಾನ ಪೀಠಿಕೆಯನ್ನು ಓದುವ ಬಗ್ಗೆ ಮತ್ತು ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಗೌರವಾನ್ವಿತ ಸಭಾಧ್ಯಕ್ಷರು ಹಾಗೂ ಸಭಾಪತಿಗಳಿಗೆ ಮನವಿ ಟಿಪ್ಪಣಿಗಳನ್ನು ಸಲ್ಲಿಸುವುದು.
    2. ಕರ್ನಾಟಕ ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪ್ರಾರ್ಥನಾ ಸಮಯದಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವುದು ಹಾಗೂ ಪ್ರತಿಜ್ಞೆಗೈಯುವ ಮುಖಾಂತರ ಪೀಠಿಕೆಯಲ್ಲಿ ಅಳವಡಿಸಲಾದ ಸಂವಿಧಾನಿಕ ತತ್ವಗಳನ್ನು ಅಳವಡಿಸಿಕೊಳ್ಳುವುದು.
    3. ರಾಜ್ಯಾದ್ಯಂತ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕ ಸ್ವಾಯತ್ತ ಸಂಸ್ಥೆಗಳು, ನಿಗಮ ಮಂಡಳಿಗಳು ಹಾಗೂ ಸಹಕಾರ ಸಂಘಗಳ ಆವರಣದ ಪ್ರಮುಖ ಸ್ಥಳಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ಕಛೇರಿಗಳಲ್ಲಿ, ಹಾಗೂ . ಎಲ್ಲಾ ರೀತಿಯ ಶಿಕ್ಷಣ ಸಂಸ್ಥೆಗಳು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದು ಕಾಣುವಂತೆ ಅನುಬಂಧದಲ್ಲಿ ನಮೂದಿಸಿರುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವುದು.

6. ಸಚಿವ ಸಂಪುಟವು ಸಮಾಜ ಕಲ್ಯಾಣ ಇಲಾಖೆಗೆ ಮೇಲಿನ ನಿರ್ದೇಶನಗಳನ್ನು ಅನುಷ್ಠಾನಗೊಳಿಸುವಲ್ಲಿ ಯಾವುದೇ ಉಲ್ಲಂಘನೆಯಾದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲು ಅಧಿಕಾರ ನೀಡಿದೆ.

ಈ ಮೇಲಿನವುಗಳನ್ನು ಅನುಷ್ಠಾನಗೊಳಿಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ : ಸಕಇ 69 ಪಕವಿ 2023, ಬೆಂಗಳೂರು</u>**
**<u>ದಿನಾಂಕ: 30-06-2023.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಕೆಳಕಂಡಂತೆ ಆದೇಶಿಸಿದೆ.

1. ಕರ್ನಾಟಕ ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪ್ರಾರ್ಥನಾ ಸಮಯದಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವುದು ಹಾಗೂ ಎಲ್ಲರೂ ಸಂವಿಧಾನದ ಪೀಠಿಕೆಗೆ ಬದ್ಧರಾಗುವುದು. ಸಂವಿಧಾನಿಕ ತತ್ವಗಳನ್ನು ತಮ್ಮ ಜೀವನ ಹಾಗೂ ಕರ್ತವ್ಯಗಳಲ್ಲಿ ಅಳವಡಿಸಿಕೊಳ್ಳಲು ಪ್ರತಿಜ್ಞೆಗೈಯುವುದು.


ile No. ED/191/VVD/2025-ED_SO_GEN2-EDUCATION HIGHER SEC (Computer No. 1847633)

2. ರಾಜ್ಯಾದ್ಯಂತ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ ಕಛೇರಿಗಳಲ್ಲಿ, ಸಾರ್ವಜನಿಕ ಸ್ವಾಯತ್ತ ಸಂಸ್ಥೆಗಳು, ನಿಗಮ ಮಂಡಳಿಗಳು ಹಾಗೂ ಸಹಕಾರ ಸಂಘಗಳ ಆವರಣದ ಪ್ರಮುಖ ಸ್ಥಳಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ಕಛೇರಿಗಳಲ್ಲಿ, ಹಾಗೂ ಎಲ್ಲಾ ರೀತಿಯ ಶಿಕ್ಷಣ ಸಂಸ್ಥೆಗಳು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದು ಕಾಣುವಂತೆ ಅನುಬಂಧದಲ್ಲಿ ನಮೂದಿಸಿರುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವುದು.
3. ರಾಜ್ಯದ ವಿಧಾನಸಭೆ ಮತ್ತು ವಿಧಾನ ಪರಿಷತ್ತುಗಳ ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಭಾರತದ ಸಂವಿಧಾನ ಪೀಠಿಕೆಯನ್ನು ಓದುವ ಕುರಿತು ಗೌರವಾನ್ವಿತ ಸಭಾಧ್ಯಕ್ಷರು ಹಾಗೂ ಸಭಾಪತಿಗಳಿಗೆ ಮನವಿ ಟಿಪ್ಪಣಿಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಸಲ್ಲಿಸುವುದು.

ಸದರಿ ಆದೇಶವನ್ನು ದಿನಾಂಕ:15-06-2023 ರಂದು ಜರುಗಿದ ರಾಜ್ಯ ಸಚಿವ ಸಂಪುಟ ಸಭೆಯು ಟಿಪ್ಪಣಿ ಸಂಖ್ಯೆ:ಸಿ.329/2023 ರಲ್ಲಿ ಅನುಮೋದಿಸಿರುವಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮೇಜರ್ ಮಣಿವಣ್ಣನ್ ಪಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಎಲ್ಲಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿಯವರಿಗೆ.
6. ಸರ್ಕಾರದ ಕಾರ್ಯದರ್ಶಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು ಸಚಿವಾಲಯ, ವಿಧಾನಸೌಧ, ಬೆಂಗಳೂರು.